ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆ

ಕರ್ನಾಟಕ ವಿಧಾನ ಪರಿಷತ್ತು

ನೂರ ನಲವತ್ತೊಂದನೆಯ ಅಧಿವೇಶನ

ಬುಧವಾರ, ದಿನಾಂಕ : 30 ನೇ ಸೆಪ್ಟೆಂಬರ್, 2020

ರಾಜ್ಯದ ದೇವಸ್ಥಾನಗಳಲ್ಲಿ ಆಡಳಿತ ಮಂಡಳಿ ಮೂಲಕ ಶಿಕ್ಷಣ ನಡೆಸುತ್ತಿರುವ ಬಗ್ಗೆ

ಶ್ರೀ ಕೆ. ಪ್ರತಾಪ್‌ಸಿಂಹ ನಾಯಕ್(ವಿಧಾನಸಭೆಯಿಂದ ಚುನಾಯಿತರಾದವರು) -

1081 (1177) ಮಾನ್ಯ ಮುಜರಾಯಿ ಹಾಗೂ ಮೀನುಗಾರಿಕೆ, ಬಂದರು ಮತ್ತು ಒಳನಾಡು ಜಲಸಾರಿಗೆ ಸಚಿವರು ಈ ವಿಷಯಗಳನ್ನು ದಯವಿಟ್ಟು ತಿಳಿಸುವರೆ -

(ಅ) ರಾಜ್ಯದ ಧಾರ್ಮಿಕದತ್ತಿ ಇಲಾಖೆಯು ಎಷ್ಟು ದೇವಸ್ಥಾನಗಳಲ್ಲಿ ದೇವಸ್ಥಾನದ ಆಡಳಿತ ಮಂಡಳಿ ಮೂಲಕ ಶಾಲಾ ಕಾಲೇಜುಗಳನ್ನು ನಡೆಸಲಾಗುತ್ತಿದೆ; (ವಿವರ ನೀಡುವುದು)

(ಆ) ಧಾರ್ಮಿಕದತ್ತಿ ಇಲಾಖೆಯ ದೇವಸ್ಥಾನಗಳು ನಡೆಸಲ್ಪಡುತ್ತಿರುವ ಶಾಲಾ ಕಾಲೇಜುಗಳ ಶಿಕ್ಷಕ, ಉಪನ್ಯಾಸಕ ಮತ್ತು ಸಿಬ್ಬಂದಿಗಳಿಗೆ ನೀಡುವ ವೇತನ ಹಾಗೂ ಇತರ ಸೌಲಭ್ಯಗಳ ಕುರಿತು ಇರುವ ಮಾನದಂಡಗಳೇನು; ಈ ಮಾನದಂಡಗಳಲ್ಲಿ ವ್ಯತ್ಯಾಸವಿರಲು ಕಾರಣವೇನು;

(ಇ) ಧಾರ್ಮಿಕದತ್ತಿ ಇಲಾಖೆಯ ದೇವಸ್ಥಾನಗಳು ನಡೆಸುತ್ತಿರುವ ಶಿಕ್ಷಣ ಸಂಸ್ಥೆಗಳಲ್ಲಿ ಅನುದಾನ ಸಂಹಿತೆಯಂತೆ (Grant in Aid Code) ಸೌಲಭ್ಯಗಳನ್ನು ನೀಡುವ ಯೋಚನೆ ಸರ್ಕಾರದ ಮುಂದಿದೆಯೇ;

(ಈ) ಧಾರ್ಮಿಕದತ್ತಿ ಇಲಾಖೆಯ ಅಧೀನದಲ್ಲಿರುವ ಸಂಸ್ಥೆಗಳಲ್ಲಿನ ಸಿಬ್ಬಂದಿಗಳಿಗೆ ವೇತನ ಮತ್ತು ಇತರ ಸೌಲಭ್ಯಗಳನ್ನು ಸಮಾನವಾಗಿ ನೀಡಲು ಸರ್ಕಾರ ಕೈಗೊಳ್ಳಲಿರುವ ಕ್ರಮಗಳೇನು?